# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ದಿನಾಂಕ: 05.12.2020

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.15/ಪಿಆರ್: 04 :2020–21

## ದಾಸರಹಳ್ಳಿ ವಾರ್ಡ್–15ರ ವಾರ್ಡ್ ಸಭೆಯ ನಡವಳಿ

ದಿ.05.12.2020 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಶ್ರೀ.ಅಶೋಕ್ ಹಿಂದ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀಮತಿ.ಅರ್ಚನ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ದಾಸರಹಳ್ಳಿ ವಾರ್ಡ್ ನಂ.15
2. ಶ್ರೀ.ನಾರಾಯಣಸ್ವಾಮಿ, ಸಹಾಯಕ ಕಂದಾಯ ಅಧಿಕಾರಿ, ದಾಸರಹಳ್ಳಿ ಉಪ–ವಿಭಾಗ
3. ಶ್ರಿ.ಪಾರ್ಥ, ಹಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
4. ಶ್ರೀಮತಿ.ಚೈತ್ರ, ಕಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
5. ಆರಕ್ಷಕ ನಿರೀಕ್ಷಕರು, ಬಾಗಲಗುಂಟೆ ಪೋಲೀಸ್ ಠಾಣೆ
6. ಶ್ರೀ.ತಮ್ಮಣ್ಣ, ಅಧ್ಯಕ್ಷರು, ವಿನಾಯಕ ಕನ್ನಡ ಸಂಘ, ದಾಸರಹಳ್ಳಿ ವಾರ್ಡ್ ನಂ.15
7. ಶ್ರೀ.ಅಂಬರೀಶ್, ಸದಸ್ಯರು, ವಿನಾಯಕ ಕನ್ನಡ ಸಂಘ, ದಾಸರಹಳ್ಳಿ ವಾರ್ಡ್ ನಂ.15
8. ಶ್ರೀ.ವೆಂಕಟೇಶ್, ಪ್ರಧಾನ ಕಾರ್ಯದರ್ಶಿ, ದಲಿತ ಸೇನೆ, ದಾಸರಹಳ್ಳಿ ವಾರ್ಡ್ ನಂ.15
9. ಶ್ರೀ.ಮುನಿರಾಜು, ದಲಿತ ಸಂಘರ್ಷ ಸಮಿತಿ ಸದಸ್ಯರು, ದಾಸರಹಳ್ಳಿ ವಾರ್ಡ್ ನಂ.15
10. ಶ್ರೀ.ರಾಜು, ಸಾಮಾಜಿಕ ಕಾರ್ಯಕರ್ತರು, ದಾಸರಹಳ್ಳಿ ವಾರ್ಡ್ ನಂ.15
11. ಶ್ರೀ.ಲಕ್ಕಪ್ಪ, ಕಾರ್ಯದರ್ಶಿಗಳು, ಒಕ್ಕಲಿಗ ಸಂಘ, ದಾಸರಹಳ್ಳಿ ವಾರ್ಡ್ ನಂ.15
12. ಶ್ರೀಮತಿ.ಅನುಸೂಯಮ್ಮ, ಉಪಾಧ್ಯಕ್ಷರು ಮಹಿಳಾ ಸಂಘ, ಟಿ.ದಾಸರಹಳ್ಳಿ

ಶ್ರೀ.ಅಶೋಕ್ ಹಿಂದ, ನೋಡೆಲ್ ಅಧಿಕಾರಿ ಹಾಗೂ ಶ್ರೀಮತಿ.ಅರ್ಚನಾ, ಸದಸ್ಯ ಕಾರ್ಯದರ್ಶಿಗಳು, ವಾರ್ಡ್ ನಂ.15, ದಾಸರಹಳ್ಳಿ ರವರುಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ ಮಾತನಾಡುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರತೀ ವಾರ್ಡ್‌ಗೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿ, ಸಾರ್ವಜನಿಕ ಕುಂದುಕೊರತೆ ನಿವಾರಣಾ ಸಂಬಂಧ ಪ್ರತೀ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಸಭೆ ಸೇರಿ ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮವಹಿಸಲು ಸೂಚಿಸಿರುವುದಾಗಿ ತಿಳಿಸಿದರು.

### 1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.

ದಿ.21.11.2020 ರಂದು ನಡೆದ ವಾರ್ಡ್ ಕಮಿಟ ಸಭೆಯಲ್ಲಿ ವಾರ್ಡ್ ಸಭೆಯ ಸದಸ್ಯರಾದ ಶ್ರೀ.ಮುನಿರಾಜು ರವರು ದಾಸರಹಳ್ಳಿ ವಾರ್ಡ್‌ನ ಕಾಳಾಸ್ತಿನಗರದ ಅಡ್ಡರಸ್ತೆಯ ಚರಂಡಿಯಲ್ಲಿ ಹೂಳು ತುಂಬಿರುವ ಕಾರಣ ನೀರು ಸರಾಗವಾಗಿ ಹರಿಯದೇ ಚರಂಡಿಯಲ್ಲಿ ನಿಂತಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿ ತುರ್ತಾಗಿ ಸದರಿ ಬಡಾವಣೆಯ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಿದ್ದರು, ಅದರಂತೆ ವಾರ್ಡ್ ಅಭಿಯಂತರರು ಸದರಿ ಅಡ್ಡರಸ್ತೆಗಳ ಚರಂಡಿಗಳಲ್ಲಿ ತುಂಬಿದ್ದ ಹೂಳನ್ನು ತೆಗೆದು, ನೀರು ಸರಾಗವಾಗಿ ಹರಿಯುವ ಕಾರ್ಯವನ್ನು ಕೈಗೊಂಡು, ಪೂರ್ಣಗೊಳಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

**2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.**

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಪ್ರತೀ ದಿನ 02 ಮೊಬೈಲ್ ಟೀಂ ನ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿರುತ್ತದೆ. ಅದರಲ್ಲಿ ಒಟ್ಟು ಫಾಸಿಟಿವ್ ಕೇಸ್ 990, ಒಟ್ಟು ಬಿಡುಗಡೆ 980, ಮರಣ ಹೊಂದಿದದವರು 07 ಹಾಗೂ ಒಟ್ಟು Active case ಪ್ರಕರಣಗಳು 10 Home Isolation ಪ್ರಕರಣಗಳು 09 & Hospitalization ಪ್ರಕರಣಗಳು 01 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಪ್ರತೀ ದಿನ ರಸ್ತೆ ಮುಂಗಟ್ಟುಗಳಲ್ಲಿರುವ ಸಾರ್ವಜನಿಕರುಗಳಿಗೆ ಕೋವಿಡ್ ಪರೀಕ್ಷೆ ನಡೆಸಲಾಗುತ್ತಿರುತ್ತದೆ.

ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಫೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಅದರಂತೆ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ಕಡ್ಡಾಯವಾಗಿ ನಿಯಮಾನುಸಾರ ರೂ.250.00 ಗಳನ್ನು ದಂಢ ವಿಧಿಸಿ ಕ್ರಮ ಜರುಗಿಸಲಾಗುತ್ತಿದ್ದು, ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುತ್ತಿರುವವರಿಗೆ ಪೋಲೀಸ್ ಸಹಾಯದೊಂದಿಗೆ ಪ್ರತೀ ನಿತ್ಯ ಸುಮಾರು 30 ರಿಂದ 35 ಜನಗಳಿಗೆ ದಂಢವಿಧಿಸಲಾಗುತ್ತಿದೆ ಎಂದು ಸಭೆಯಲ್ಲಿ ಮಾರ್ಷಲ್ ರವರು ವಿವರಿಸಿದರು.

ಪೌರ ಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗಾಗಿ ದಾಸರಹಳ್ಳಿ ವ್ಯಾಪ್ತಿಯಲ್ಲಿ 10x10 ಅಡಿ ಅಳತೆಯ ಖಾಲಿ ನಿವೇಶನವನ್ನು ನೀಡಲು ಹಿರಿಯ ಆರೋಗ್ಯ ಪರಿವೀಕ್ಷಕರುಗಳು ಸಭೆಯಲ್ಲಿ ತಿಳಿಸಿದರು. ಸದರಿ ನಿವೇಶನ ನೀಡುವ ಸಂಬಂಧ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಲು ಸಭೆಯಲ್ಲಿ ತಿಳಿಸಿದರು.

**3. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.**

ಘನತ್ಯಾಜ್ಯ ನಿರ್ವಹಣೆಯ ಸಂಬಂಧ ವಾರ್ಡ್‌ನಲ್ಲಿ 19 ಆಟೋಗಳು, ಒಣ ಕಸ ಸಂಗ್ರಹಣಾ ಆಟೋ-03, ಹಾಗೂ 02 ಕಾಂಪ್ಯಾಕ್ಟರ್ ವಾಹನಗಳು ಘನತ್ಯಾಜ್ಯ ವಿಲೇವಾರಿಗಾಗಿ ನಿಯೋಜಿಸಲಾಗಿರುತ್ತದೆಂದು ವಾರ್ಡ್ ಸಮಿತಿ ಸಭೆಯಲ್ಲಿ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿದರು. ವಾರ್ಡ್ ಸದಸ್ಯರುಗಳು ರಸ್ತೆಯ ಬದಿಯಲ್ಲಿ ಹಾಗೂ ಖಾಲಿ ನಿವೇಶಗಳಲ್ಲಿ ಸಾರ್ವಜನಿಕರು ಕಸವನ್ನು ಹಾಕುತ್ತಿರುವುದಾಗಿ ಹಿರಿಯ ಆರೋಗ್ಯ ಪರಿವೀಕ್ಷಕರವರಿಗೆ ದೂರಿದರು ಹಾಗೂ ಇದರ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಿದರು. ಸದರಿ ವಿಷಯದ ಬಗ್ಗೆ ತುರ್ತು ಕ್ರಮವಹಿಸಲು ನೋಡೆಲ್ ಅಧಿಕಾರಿ ರವರು ಆರೋಗ್ಯ ಪರಿವೀಕ್ಷಕರಿಗೆ ಸಭೆಯಲ್ಲಿ ತಿಳಿಸಿದರು.

**4.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.**

ದಾಸರಹಳ್ಳಿ ವಾರ್ಡ್ ನಂ.15ರಲ್ಲಿನ ಸರ್ಕಾರಿ ಶಾಲೆ ರಸ್ತೆ, ಪೈಪ್‌ಲೈನ್ ರಸ್ತೆ & ಆಫೀಸರ್ಸ್ ಮಾಡೆಲ್ ಕಾಲೋನಿ ರಸ್ತೆಗಳಲ್ಲಿ ಉಂಟಾಗಿರುವ ಗುಂಡಿಗಳನ್ನು ಡಾಂಬರಿನ ಮುಖಾಂತರ ಮುಚ್ಚುವ ಕಾಮಗಾರಿ ಮುಕ್ತಾಯಗೊಂಡಿರುತ್ತದೆ ಎಂದು ಸಭೆಯಲ್ಲಿ ಸಹಾಯಕ ಅಭಿಯಂತರರು ತಿಳಿಸಿದರು.

**5. ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ.**

ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ಕಾಳಾಸ್ತಿನಗರ ಬಡಾವಣೆಯಲ್ಲಿ ಹಾಲಿಇದ್ದ ಬೋರ್‌ವೆಲ್ ಕೆಟ್ಟುಹೋಗಿದ್ದು, ಬಡಾವಣೆಯ ಸಾರ್ವಜನಿಕರಿಗೆ ಕುಡಿಯಲು ಹಾಗೂ ದೈನಂದಿನ ಕೆಲಸ ಕಾರ್ಯಗಳಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ, ಹಾಗೂ ಸದರಿ ಬೋರ್‌ವೆಲ್‌ನ್ನು ತುರ್ತಾಗಿ ಸರಿಪಡಿಸಿಕೊಡಲು ವಾರ್ಡ್ ಸದಸ್ಯರು ಸಭೆಯಲ್ಲಿ ತಿಳಿಸಿದರು.

ಸದರಿ ಬೋರ್‌ವೆಲ್ ರಿಪೇರಿ ಕಾರ್ಯವನ್ನು ತುರ್ತಾಗಿ ಕೈಗೊಂಡು ವಾರ್ಡ್‌ನ ಸಾರ್ವಜನಿಕರಿಗೆ ತೊಂದರೆ ಉಂಟಾಗದಂತೆ ಅನುಕೂಲ ಮಾಡಿಕೊಡಲು ನೋಡೆಲ್ ಅಧಿಕಾರಿ ರವರು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.

**6. ವಿದ್ಯುತ್ ಸರಬರಾಜು, ಬೆಸ್ಕಾಂಗೆ ಸಂಬಂಧಿಸಿದ ಬಗ್ಗೆ:**

ಶ್ರೀ.ಮುನಿರಾಜು ದಲಿತ ಸಂಘರ್ಷ ಸಮಿತಿ ಸದಸ್ಯರು ರವರು ಕಾಳಾಸ್ತಿನಗರದ ಅಡ್ಡರಸ್ತೆಗಳಲ್ಲಿ ಬೀದಿ ದೀಪಗಳ ನಿರ್ವಹಣೆ ಕಾರ್ಯವನ್ನು ಸರಿಯಾಗಿ ನಡೆಸುತ್ತಿಲ್ಲ, ಈ ಬಗ್ಗೆ ಸದರಿ ನಿರ್ವಹಣೆಯ ಗುತ್ತಿಗೆದಾರರನ್ನು ಸಂಪರ್ಕಿಸಲು ಗುತ್ತಿಗೆದಾರರ ಹೆಸರು ಮತ್ತು ದೂರವಾಣಿ ಸಂಖ್ಯೆಯ ನಾಮಫಲಕಗಳನ್ನು ಬಡಾವಣೆಯ ವಿವಿಧ ಸ್ಥಳಗಳಲ್ಲಿ ಹಾಕಲು ಸಭೆಯಲ್ಲಿ ಪ್ರಸ್ತಾಪಿಸಿದರು.

ಸಂಬಂಧಪಟ್ಟ ಬಿಬಿಎಂಪಿ ವಿದ್ಯುತ್ ವಿಭಾಗದ ಅಧಿಕಾರಿಗಳು ಸದರಿ ವಿಷಯದ ಬಗ್ಗೆ ತುರ್ತಾಗಿ ಕ್ರಮವಹಿಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

**8. ಒಂಟಿಮನೆಗಳ ಬಗ್ಗೆ:**

ದಾಸರಹಳ್ಳಿ ವಾರ್ಡ್‌ಗೆ 2019-20 ನೇ ಸಾಲಿನ ಒಂಟಿಮನೆ ನಿರ್ಮಾಣ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಅನುದಾನಕ್ಕೆ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಸದರಿ ಫಲಾನುಭವಿಗಳಿಗೆ ಕಾರ್ಯಾದೇಶ ನೀಡುವ ಪ್ರಕ್ರಿಯೆ ಹಂತದಲ್ಲಿದ್ದು, ಕಾರ್ಯಾದೇಶ ನೀಡಲು ತುರ್ತು ಕ್ರಮವಹಿಸುವುದಾಗಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

ಅಂತಿಮವಾಗಿ ನೋಡೆಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿಗಳು ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು, ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವಯತೆ ಇಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ. 15, ದಾಸರಹಳ್ಳಿ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧಿಕಾರಿಗಳ ಮಾಹಿತಿಗಾಗಿ**

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.